**Akashvani : Bangalore**
**National Bulletin In Kannada**
**21.04.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**21.04.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಲೋಕಸಭಾ ಚುನಾವಣೆ; ಉಳಿದ ಬಾಕಿ ಹಂತಗಳಿಗಾಗಿ ಪ್ರಚಾರ ಚುರುಕು-ರಾಜಕೀಯ ಪಕ್ಷಗಳ ಪ್ರಮುಖ ಮುಖಂಡರು, ತಾರಾ ಪ್ರಚಾರಕರು ಭಾಗಿ

೨. ಜಾರಿ ನಿರ್ದೇಶನಾಲಯ ಮತ್ತು ಸಿಬಿಐನಂತಹ ಕೇಂದ್ರೀಯ ಏಜೆನ್ಸಿಗಳ ಕೆಲಸದಲ್ಲಿ ಸರ್ಕಾರ ಹಾಗೂ ರಾಜಕಾರಣಿಗಳು ಹಸ್ತಕ್ಷೇಪ ಮಾಡಬಾರದು -ಪ್ರಧಾನಮಂತ್ರಿ ನರೇಂದ್ರ ಮೋದಿ

೩. ಇಂದು ಭಗವಾನ್ ಮಹಾವೀರ್ ಜಯಂತಿ; ರಾಷ್ಟ್ರಪತಿ ಸೇರಿದಂತೆ ಗಣ್ಯರ ಶುಭಾಶಯ

೪. ಐಪಿಎಲ್ ಟಿ-೨೦ ಕ್ರಿಕೆಟ್; ಡೆಲ್ಲಿ ಕ್ಯಾಪಿಟಲ್ಸ್ ತಂಡದ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ತಂಡಕ್ಕೆ ೬೭ ರನ್‌ಗಳ ಭರ್ಜರಿ ಗೆಲುವು

**<><*<><>*><>**

ಲೋಕ ಸಭಾ ಚುನಾವಣೆಯ ಮೊದಲ ಹಂತದಿದ್ದು, ಉಳಿದ ಹಂತದ ಸಾರ್ವತ್ರಿಕ ಚುನಾವಣೆಯ ಪ್ರಚಾರ ಕಾರ್ಯ ಚುರುಕುಗೊಂಡಿದೆ. ಮಹಾಮೈತ್ರಿಕೂಟ ಮತ್ತು ಎನ್‌ಡಿಎ ಸೇರಿದಂತೆ ಎಲ್ಲಾ ರಾಜಕೀಯ ಪಕ್ಷಗಳ ಹಿರಿಯ ನಾಯಕರು ಮತ್ತು ತಾರಾ ಪ್ರಚಾರಕರು ಮತದಾರರನ್ನು ಓಲೈಸಲು ದೇಶಾದ್ಯಂತ ಹಲವು ರ್‍ಯಾಲಿಗಳನ್ನು ನಡೆಸುತ್ತಿದ್ದಾರೆ. ಕೇರಳದಲ್ಲಿ ೨೦, ಕರ್ನಾಟಕದಲ್ಲಿ ೧೪, ರಾಜಸ್ಥಾನದಲ್ಲಿ ೧೩, ಉತ್ತರ ಪ್ರದೇಶ ಮತ್ತು ಮಹಾರಾಷ್ಟ್ರದಲ್ಲಿ ತಲಾ ಎಂಟು, ಮಧ್ಯಪ್ರದೇಶದಲ್ಲಿ ಏಳು, ಅಸ್ಸಾಂ ಮತ್ತು ಬಿಹಾರದಲ್ಲಿ ತಲಾ ಐದು, ಪಶ್ಚಿಮ ಬಂಗಾಳ ಮತ್ತು ಛತ್ತೀಸ್‌ಗಢದಲ್ಲಿ ತಲಾ ಮೂರು ಮತ್ತು ತ್ರಿಪುರ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲಿ ತಲಾ ಒಂದು ಸ್ಥಾನಗಳಿಗಾಗಿ ಈ ತಿಂಗಳ ೨೬ ರಂದು ಎರಡನೇ ಹಂತದಲ್ಲಿ ಚುನಾವಣೆ ನಡೆಯಲಿದೆ. ಪ್ರಧಾನಿ ಮತ್ತು ಬಿಜೆಪಿಯ ಹಿರಿಯ ನಾಯಕ ನರೇಂದ್ರ ಮೋದಿ ಅವರು ನಿನ್ನೆ ಮಹಾರಾಷ್ಟ್ರದ ನಾಂದೇಡ್ ಮತ್ತು ಪರ್ಭಾನಿ ಮತ್ತು ಕರ್ನಾಟಕದ ಚಿಕ್ಕಬಳ್ಳಾಪುರ ಮತ್ತು ಬೆಂಗಳೂರಿನಲ್ಲಿ ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ತಮ್ಮ ಪ್ರಗತಿಯ ವರದಿ ಮಂಡಿಸಲು ಹಾಗೂ ಜನರ ಆಶೀರ್ವಾದ ಪಡೆಯಲು

ಬಂದಿರುವುದಾಗಿ ಅವರು ಹೇಳಿದರು. ತಮ್ಮ ಸರ್ಕಾರದ ನೀತಿಗಳಿಂದ ಪರಿಶಿಷ್ಟ ಜಾತಿ, ಪಂಗಡ ಮತ್ತು ಒಬಿಸಿ ಸಮುದಾಯಗಳು ಪ್ರಯೋಜನ ಪಡೆದಿವೆ ಮತ್ತು ೨೫ ಕೋಟಿಗೂ ಹೆಚ್ಚು ಜನರನ್ನು ಬಡತನ ರೇಖೆಗಿಂತ ಮೇಲಕ್ಕೆತ್ತಲಾಗಿದೆ ಎಂದು ಪ್ರಧಾನಿ ಹೇಳಿದರು. ೨೦೪೭ ರ ವಿಕಸಿತ್ ಭಾರತಕ್ಕಾಗಿ ವಾರದ ಏಳೂದಿನ ೨೪ ಗಂಟೆಗಳ ಕಾಲವೂ ಕೆಲಸ ಮಾಡುವ ಬದ್ಧತೆಯನ್ನು ಅವರು ಮತ್ತೊಮ್ಮೆ ವ್ಯಕ್ತಪಡಿಸಿದರು. ತಮ್ಮ ೧೦ ವರ್ಷಗಳ ಆಡಳಿತದ ಕುರಿತು ಮಾತನಾಡಿದ ಪ್ರಧಾನಿ ಮೋದಿ, ಇಂದು ಭಾರತ ಐದನೇ ಅತಿದೊಡ್ಡ ಆರ್ಥಿಕತೆಯಾಗಿದೆ, ದಾಖಲೆಯ ವಿದೇಶಿ ಹೂಡಿಕೆಗಳಿವೆ, ರಫ್ತು ಮತ್ತು ಉತ್ಪಾದನಾ ಕ್ಷೇತ್ರಗಳು ವೇಗವಾಗಿ ಬೆಳೆಯುತ್ತಿವೆ ಮತ್ತು ಭಾರತ ಇಂದು ಮೊಬೈಲ್ ಫೋನ್‌ಗಳ ಪ್ರಮುಖ ರಫ್ತುದಾರ ದೇಶವಾಗಿದೆ ಎಂದು ಹೇಳಿದರು. ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ದೇವೇಗೌಡ ಅವರು ಮಾತನಾಡಿ, ಕಾಂಗ್ರೆಸ್ ಸರಕಾರ ೨೦೧೪ರಲ್ಲಿ ಸರಕಾರ ತೊರೆದಾಗ ಬೊಕ್ಕಸ ಖಾಲಿ ಮಾಡಿದೆ ಎಂದು ಆರೋಪಿಸಿದರು. ಹೇಳಿಕೆಯೊಂದರಲ್ಲಿ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಿಜೆಪಿ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಯಂತೆ ಸೂರ್ಯ ಘರ್ ಮುಫ್ತ್ ಬಿಜಿಲಿ ಕಾರ್ಯಕ್ರಮದಿಂದ ಸೋಲಾರ್ ಪ್ಯಾನಲ್‌ಗಳ ವೆಚ್ಚವನ್ನು ಜನರೇ ಭರಿಸಬೇಕಾಗಿ ಬಂದು ಅದು ಮೂಲಕ ಬಡವರ ಮೇಲೆ ಹೊರೆ ಹಾಕಿದಂತಾಗಿದೆ ಎಂದು ಆರೋಪಿಸಿದ್ದಾರೆ. ಯುಡಿಎಫ್ ಪ್ರಚಾರದ ಭಾಗವಾಗಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಕೇರಳದ ಎರಿಯಾಡ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಉತ್ತರ ಪ್ರದೇಶದ ಮಥುರಾದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ಅಮಿತ್ ಶಾ, ಈ ಬಾರಿ ಉತ್ತರ ಪ್ರದೇಶದ ಜನರು ಎಲ್ಲಾ ೮೦ ಸ್ಥಾನಗಳಲ್ಲಿ ಬಿಜೆಪಿಯನ್ನು ಗೆಲ್ಲಿಸುತ್ತಾರೆ ಎಂಬ ಭರವಸೆ ವ್ಯಕ್ತಪಡಿಸಿದರು. ಅಮ್ರೋಹಾದಲ್ಲಿ ನಡೆದ ರಾಲಿಯಲ್ಲಿ ಮಾತನಾಡಿದ ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ, ಭಾರತ ಮೈತ್ರಿ ಸರ್ಕಾರ ರಚನೆಯಾದರೆ ರೈತರ ಸಾಲ ಮನ್ನಾ ಮಾಡಲಾಗುವುದು ಎಂದು ಹೇಳಿದ್ದಾರೆ. ಇದರೊಂದಿಗೆ ಎಂಎನ್‌ಆರ್‌ಇಜಿಎ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಗೌರವಧನವನ್ನು ದ್ವಿಗುಣಗೊಳಿಸಲಾಗುವುದು ಎಂದು ಹೇಳಿದರು.

**<><*<><>*><>**

ಲೋಕಸಭಾ ಚುನಾವಣೆಯ ಮೂರನೇ ಹಂತಕ್ಕೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಮೊನ್ನೆ ಮುಕ್ತಾಯಗೊಂಡಿದ್ದು ನಿನ್ನೆ ನಾಮಪತ್ರಗಳ ಪರಿಶೀಲನೆ ನಡೆಯಿತು. ಮೂರನೇ ಹಂತದಲ್ಲಿ ೧೦ ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳಲ್ಲಿನ ೯೪ ಸಂಸದೀಯ ಸ್ಥಾನಗಳಿಗಾಗಿ ಮುಂದಿನ ತಿಂಗಳ ಏಳರಂದು ಚುನಾವಣೆ ನಡೆಯಲಿದೆ. ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು

ಹಿಂಪಡೆಯಲು ನಾಳೆ ಸೋಮವಾರ ಕಡೆಯ ದಿನವಾಗಿದೆ. ಗುಜರಾತ್‌ನಲ್ಲಿ ಐದು ವಿಧಾನಸಭಾ ಸ್ಥಾನಗಳಿಗಾಗಿ ಉಪಚುನಾವಣೆಗೆ ಕೂಡಾ ನಾಮಪತ್ರಗಳ ಪರಿಶೀಲನೆ ನಡೆಯಿತು. ಏತನ್ಮಧ್ಯೆ, ಲೋಕಸಭಾ ಚುನಾವಣೆಯ ನಾಲ್ಕನೇ ಹಂತಕ್ಕಾಗಿ ನಾಮಪತ್ರ ಸಲ್ಲಿಕೆ ಪ್ರಗತಿಯಲ್ಲಿದೆ. ಈ ಹಂತದಲ್ಲಿ ಒಂಭತ್ತು ರಾಜ್ಯಗಳು ಮತ್ತು ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶದಲ್ಲಿ ಹರಡಿರುವ ೯೬ ಲೋಕಸಭಾ ಸ್ಥಾನಗಳಿಗಾಗಿ ಮುಂದಿನ ತಿಂಗಳ ೧೩ ರಂದು ಚುನಾವಣೆ ನಡೆಯಲಿದೆ. ಈ ಹಂತಕ್ಕಾಗಿ ನಾಮಪತ್ರಗಳನ್ನು ಈ ತಿಂಗಳ ೨೫ ರವರೆಗೂ ಸಲ್ಲಿಸಬಹುದಾಗಿದೆ.

<><*<><>*><>

ಉತ್ತರಪ್ರದೇಶದ ಮೊರಾದಾಬಾದ್ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಕುನ್ವರ್ ಸರ್ವೇಶ್ ಸಿಂಗ್ ಅವರು ನವದೆಹಲಿಯ ಏಮ್ಸ್ ಆಸ್ಪತ್ರೆಯಲ್ಲಿ ನಿನ್ನೆ ನಿಧನರಾದರು. ಕೆಲದಿನಗಳಿಂದ ಅವರು ಅಸ್ವಸ್ಥರಾಗಿದ್ದರು. ಮೊರಾದಾಬಾದ್ ನಲ್ಲಿ ಲೋಕಸಭಾ ಚುನಾವಣೆಗಳ ಮೊದಲ ಹಂತದಲ್ಲಿ ಮತದಾನ ನಡೆದಿತ್ತು.  ಸರ್ವೇಶ್ ಸಿಂಗ್ ಅವರು ೨೦೧೪ ರಲ್ಲಿ ಮೊರಾದಾಬಾದ್ ನಿಂದ ಸಂಸದರಾಗಿ ಆಯ್ಕೆಯಾಗಿದ್ದರು.

<><*<><>*><>

ಮಧ್ಯಪ್ರದೇಶದಲ್ಲಿ ಲೋಕಸಭಾ ಚುನಾವಣೆಗಳ ಮೂರನೇ ಹಂತಕ್ಕಾಗಿ ೯ ಸಂಸದೀಯ ಕ್ಷೇತ್ರಗಳಲ್ಲಿ ಸ್ವೀಕರಿಸಲಾದ ನಾಮಪತ್ರಗಳ ಪರಿಶೀಲನೆಯ ನಂತರ ೧೪೦ ಅಭ್ಯರ್ಥಿಗಳ ನಾಮಪತ್ರಗಳನ್ನು ಸಿಂಧುವೆಂದು ಪರಿಗಣಿಸಲಾಗಿದೆ.೧೩ ಅಭ್ಯರ್ಥಿಗಳ ನಾಮಪತ್ರಗಳನ್ನು ತಿರಸ್ಕರಿಸಲಾಗಿದೆ.  ಮತ್ತೊಂದೆಡೆ ನಾಲ್ಕನೇ ಹಂತಕ್ಕಾಗಿ ಆರು ಮಂದಿ ಅಭ್ಯರ್ಥಿಗಳು ನಿನ್ನೆ ೯ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಇದುವರೆಗೂ ಈ ಹಂತಕ್ಕಾಗಿ ೧೬ ಅಭ್ಯರ್ಥಿಗಳಿಂದ ೨೫ ನಾಮಪತ್ರಗಳು ಸಲ್ಲಿಕೆಯಾಗಿವೆ.

<><*<><>*><>

ಜಾರಿ ನಿರ್ದೇಶನಾಲಯ  ಮತ್ತು ಸಿಬಿಐನಂತಹ ಕೇಂದ್ರೀಯ ಏಜೆನ್ಸಿಗಳನ್ನು ಸ್ವತಂತ್ರವಾಗಿ ಕಾರ್ಯ ನಿರ್ವಹಿಸಲು ಬಿಡಬೇಕು ಹೊರತು ಸರ್ಕಾರ ಮತ್ತು ರಾಜಕಾರಣಿಗಳು ಅವರ ಕೆಲಸದಲ್ಲಿ ಹಸ್ತಕ್ಷೇಪ ಮಾಡಬಾರದೆಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಖಾಸಗಿ ಸುದ್ದಿವಾಹಿನಿಯೊಂದಕ್ಕೆ ಸಂದರ್ಶನ ನೀಡಿದ ಸಂದರ್ಭದಲ್ಲಿ ಕೇಂದ್ರೀಯ ಏಜೆನ್ಸಿಗಳ ದುರಪಯೋಗ ಕುರಿತ ಆರೋಪಗಳಿಗೆ ಸಂಬಂಧಿಸಿದ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಪ್ರಧಾನಿ, ಈ ಸಂಸ್ಥೆಗಳು ತಮ್ಮ

ಕೆಲಸವನ್ನು ತಾವು ಮಾಡುತ್ತಿದ್ದು, ಜಾರಿ ನಿರ್ದೇಶನಾಲಯದ ಕೆಲಸ ಕಾರ್ಯಗಳಲ್ಲಿ ಹಸ್ತಕ್ಷೇಪ ಮಾಡಲು ಪ್ರಧಾನ ಮಂತ್ರಿಗೆ ಕೂಡಾ ಯಾವುದೇ ಹಕ್ಕಿಲ್ಲ ಎಂದು ಹೇಳಿದರು. ೨೦೧೪ ಕ್ಕೆ ಮುನ್ನ ಜಾರಿ ನಿರ್ದೇಶನಾಲಯ ಕೇವಲ ೮೪ ಶೋಧ ಕಾರ್ಯಾಚರಣೆಗಳನ್ನು ನಡೆಸಿತ್ತು, ಮತ್ತು ೨೦೧೪ ರ ನಂತರ ಒಟ್ಟು ೭ ಸಾವಿರ ಶೋಧ ಕಾರ್ಯಾಚರಣೆಗಳನ್ನು ನಡೆಸಿದ್ದು, ಇದು ಏಜೆನ್ಸಿಯ ಸಾಮರ್ಥ್ಯವನ್ನು ತೋರಿಸುತ್ತದೆ ಎಂದರು. ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಪ್ರಧಾನಿ, ದೇಶದ ನಾಗರಿಕರ ಹೊರೆಯನ್ನು ಕಡಿಮೆ ಮಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದರು. ಲೋಕಸಭಾ ಚುನಾವಣೆಯನ್ನು ಬಿಜೆಪಿ ದೇಶದ ಜನತೆಗಾಗಿ ಎದುರಿಸುತ್ತಿದೆ ಎಂದರು. ರಾಷ್ಟ್ರ ಮೂರು ದಶಕಗಳ ಕಾಲ ಅಸ್ಥಿರ ಸರ್ಕಾರಗಳಿಗೆ ಸಾಕ್ಷಿಯಾಗಿದ್ದು, ಇದರಿಂದಾಗಿ ದೇಶದ ಅಭಿವೃದ್ಧಿಯ ಮೇಲೆ ಪರಿಣಾಮ ಉಂಟಾಗಿತ್ತು ಎಂದರು. ಸ್ಥಿರ ಸರ್ಕಾರ ಏನು ಮಾಡಬಹುದು ಎಂಬುದು ದೇಶದ ಜನರ ಅನುಭವಕ್ಕೆ ಬಂದಿದೆ ಎಂದು ಪ್ರಧಾನಿ ಹೇಳಿದರು.

**<><*<><>*><>**

ಇಂದು ಭಗವಾನ್ ಮಹಾವೀರರ ಜಯಂತಿ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಈ ಸಂದರ್ಭದಲ್ಲಿ ದೇಶದ ಜನತೆಗೆ, ಅದರಲ್ಲೂ ವಿಶೇಷವಾಗಿ ಜೈನ ಸಮುದಾಯಕ್ಕೆ ಶುಭ ಕೋರಿದ್ದಾರೆ. ಭಗವಾನ್ ಮಹಾವೀರರು ಅಹಿಂಸೆ ಮತ್ತು ಅನುಕಂಪದ ಪ್ರತೀಕವಾಗಿದ್ದಾರೆ. ಅವರ ಜಯಂತಿ ಪ್ರೀತಿ ಮತ್ತು ಶಾಂತಿ ಸಂದೇಶ ನೀಡುತ್ತದೆ ಎಂದು ತಿಳಿಸಿದ್ದಾರೆ. ಮಹಾವೀರ ಜಯಂತಿ ಅಂಗವಾಗಿ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮಹಾವೀರ್ ಜಯಂತಿಯ ಪವಿತ್ರ ಸಂದರ್ಭದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯ ಭಾರತ್ ಮಂಟಂಪಂ ನಲ್ಲಿ ಬೆಳಿಗ್ಗೆ ೧೦ ಗಂಟೆಗೆ ಭಗವಾನ್ ಮಹಾವೀರ್ ನಿರ್ವಾಣ ಮಹೋತ್ಸವವನ್ನು ಉದ್ಘಾಟಿಸಲಿದ್ದಾರೆ. ಪ್ರಧಾನಿ ಮೋದಿಯವರು ಈ ಸ್ಮರಣಾರ್ಥ ಅಂಚೆ ಚೀಟಿ ಮತ್ತು ನಾಣ್ಯವೊಂದನ್ನು ಬಿಡುಗಡೆಮಾಡಿ, ಸಭಿಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ೨೪ನೇ ತೀರ್ಥಂಕರರಾದ ಭಗವಾನ್ ಮಹಾವೀರರು ಅಹಿಂಸೆ, ಸತ್ಯ, ಅಸ್ತೇಯ ಅಂದರೆ ಕಳ್ಳತನ ಮಾಡದಿರುವುದು, ಬ್ರಹ್ಮಚರ್ಯ ಮತ್ತು ಅಪರಿಗ್ರಹ ಎಂಬ ಜೈನ ತತ್ವಗಳ ಮೂಲಕ ಶಾಂತಿಯುತ ಸಹಬಾಳ್ವೆ ಮತ್ತು ಸಾರ್ವತ್ರಿಕ ಭ್ರಾತೃತ್ವದ ಮಾರ್ಗವನ್ನು ಬೆಳಗಿಸಿದರು. ಜೈನ ಸಮುದಾಯದ ಸಂತರೊಂದಿಗೆ ಭಾರತ ಮಂಟಪದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಸರ್ಕಾರವು ಜೈನ ಸಮುದಾಯದೊಂದಿಗೆ ಈ ಸಂದರ್ಭವನ್ನು ಸ್ಮರಿಸುತ್ತಿದೆ.

**<><*<><>*><>**

ಭಾರತೀಯ ನೌಕಾಪಡೆಯು ಪೂರ್ವ ಕರಾವಳಿಯಲ್ಲಿ ಪೂರ್ವಿ ಲೆಹರ್ ಸಮರಾಭ್ಯಾಸ ನಡೆಸಿತು. ಸಾಗರ ಭದ್ರತೆ ಸವಾಲುಗಳನ್ನು ಎದುರಿಸಲು ಭಾರತೀಯ ನೌಕಾ ಪಡೆಯ ಸನ್ನದ್ಧತೆಯ ಅಂದಾಜಿಸುವ ನಿಟ್ಟಿನಲ್ಲಿ ಪ್ರಕ್ರಿಯೆಗಳ ಮೌಲ್ಯಮಾಪನ ಈ ಸಮರಾಭ್ಯಾಸದ ಗುರಿಯಾಗಿದೆ. ಸಮರಾಭ್ಯಾಸವು ಹಡಗುಗಳು, ಜಲಾಂತರ್ಗಾಮಿಗಳು, ವಿಮಾನಗಳು,  ಮತ್ತು ವಿಶೇಷ ಪಡೆಗಳ ಪಾಲ್ಗೊಳ್ಳುವಿಕೆಗೆ ಸಾಕ್ಷಿಯಾಯಿತೆಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

<><*<><>*><>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡ, ಡೆಲ್ಲಿ ಕ್ಯಾಪಿಟಲ್ಸ್ ತಂಡದ ವಿರುದ್ಧ ೬೭ ರನ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಟಾಸ್ ಸೋತು, ಮೊದಲು ಬ್ಯಾಟ್ ಮಾಡಿದ ಸನ್ ರೈಸರ್ಸ್ ಹೈದರಾಬಾದ್, ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೬೬ ರನ್ ಗಳಿಸಿತು. ೨೬೭ ರನ್ ಗಳ ಗೆಲುವಿನ ಮೊತ್ತವನ್ನು ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ತಂಡ, ೧೯.೧ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೯೯ ರನ್ ಗಳಿಸಲಷ್ಟೇ ಶಕ್ತವಾಯಿತು.  ಸನ್ ರೈಸರ್ಸ್ ಹೈದರಾಬಾದ್ ಪರ ಬ್ಯಾಟಿಂಗ್‌ನಲ್ಲಿ ಟ್ರಾವಿಸ್ ಹೆಡ್ ೩೨ ಎಸೆತಗಳಲ್ಲಿ ೮೯, ಅಭಿಷೇಕ್ ಶರ್ಮಾ ೧೨ ಎಸೆತಗಳಲ್ಲಿ ೪೬ ರನ್ ಗಳಿಸಿದರು. ಶಹ್‌ಬಾಝ್ ಅಹ್ಮದ್ ೨೯ ಎಸೆತಗಳಲ್ಲಿ ಅಜೇಯ ೫೯ ರನ್ ಗಳಿಸಿದರು. ಟ್ರಾವಿಸ್ ಹೆಡ್ ಅವರನ್ನು ಪಂದ್ಯಶ್ರೇಷ್ಠ ಎಂದು  ಪ್ರಕಟಿಸಲಾಯಿತು. ಇಂದು ಎರಡು ಪಂದ್ಯಗಳು ನಡೆಯಲಿದ್ದು, ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ರಾಯಲ್ಸ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಮೊತ್ತೊಂದು ಪಂದ್ಯದಲ್ಲಿ ಚಂಡೀಗಢದ ಮುಲಾನ್‌ಪುರ್‌ನಲ್ಲಿ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಪಂಜಾಬ್ ಕಿಂಗ್ಸ್ ತಂಡ, ಗುಜರಾತ್ ಟೈಟಾನ್ಸ್ ತಂಡದೊಂದಿಗೆ ಸೆಣಸಲಿದೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.